I/725434/2024

**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

**File No:** DTE-ADMI0ACM2/ 74 /2024

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು - 560 001.
ದಿನಾಂಕ:16-12-2024.

**-:: ಸು ತ್ತೋ ಲೆ ::-**

**ವಿಷಯ:** 2024–25ನೇ ಶೈಕ್ಷಣಿಕ ಸಾಲಿನ 02, 04, 06ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳನ್ನು ಪ್ರಾರಂಭಿಸಲು ದಿನಾಂಕವನ್ನು ನಿಗಧಿಪಡಿಸುವ ಕುರಿತು.

**ಉಲ್ಲೇಖ:** ಈ ಕಛೇರಿ ಪರಿಷ್ಕೃತ ಶೈಕ್ಷಣಿಕ ವೇಳಾಪಟ್ಟಿ ದಿ:19.10.2024

*********

ರಾಜ್ಯದ ಎಲ್ಲಾ ಡಿಪ್ಲೋಮಾ ಕಾಲೇಜುಗಳಲ್ಲಿ 2024–25ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ 02, 04, 06ನೇ ಸೆಮಿಸ್ಟರ್ (ರೆಗ್ಯುಲರ್ ಡಿಪ್ಲೋಮಾ ಪ್ರೋಗ್ರಾಂ) 03 & 05ನೇ ಸೆಮಿಸ್ಟರ್ (ಪಾರ್ಟ್ ಟೈಂ) ಡಿಪ್ಲೋಮಾ ತರಗತಿಗಳನ್ನು ***ದಿ:13.12.2024ರಂದು*** ಪ್ರಾರಂಬಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ದಿನಾಂಕವನ್ನು ನಿಗಧಿಪಡಿಸಲಾಗಿತ್ತು,

ಆದರೆ, ತಾಂತ್ರಿಕ ಪರೀಕ್ಷಾ ಮಂಡಳಿಯವರು ಪರೀಕ್ಷಾ ವೇಳಾಪಟ್ಟಿಯನುಸಾರ ನಡೆಯಬೇಕಿದ್ದ ನವೆಂಬರ್/ಡಿಸೆಂಬರ್-24ರ ಡಿಪ್ಲೋಮಾ ಪರೀಕ್ಷೆಗಳನ್ನು ಕಾರಣಾಂತರಗಳಿಂದ ದಿ:17.12.2024ರವರೆಗೆ ನಡೆಸಲು ದಿನಾಂಕವನ್ನು ನಿಗಧಿಪಡಿಸಿರುವುದರಿಂದ **02, 04, 06ನೇ ಸೆಮಿಸ್ಟರ್ (ರೆಗ್ಯುಲರ್ ಡಿಪ್ಲೋಮಾ ಪ್ರೋಗ್ರಾಂ) 03 & 05ನೇ ಸೆಮಿಸ್ಟರ್ (ಪಾರ್ಟ್ ಟೈಂ) ಡಿಪ್ಲೋಮಾ ತರಗತಿಗಳನ್ನು ದಿನಾಂಕ:18.12.2024ರಂದು ಪ್ರಾರಂಭಿಸಲು** ಈ ಮೂಲಕ ತಿಳಿಸಲಾಗಿದೆ. ಪ್ರಯುಕ್ತ, ಇದನ್ನು ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪಾಠ ಪ್ರವಚನಗಳನ್ನು ಮುಕ್ತಾಯಗೊಳಿಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಉಳಿದಂತೆ, ಉಲ್ಲೇಖಿತ ಪರಿಷ್ಕೃತ ಶೈಕ್ಷಣಿಕ ವೇಳಾಪಟ್ಟಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

Signed by
Prasanna H
Date: 16-12-2024 18:36:21

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ,**
**ಬೆಂಗಳೂರು**

**ಇವರಿಗೆ,**

*ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ – ಸೂಕ್ತ ಕ್ರಮಕ್ಕಾಗಿ ಹಾಗೂ ಅನುಸರಣೆಗಾಗಿ.*

I/725434/2024



**ಪ್ರತಿ:-**

1. ಆಯುಕ್ತರ ಆಪ್ತಶಾಖೆಗೆ.
2. ನಿರ್ದೇಶಕರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಜಂಟಿ ನಿರ್ದೇಶಕರು(ಪರೀಕ್ಷೆ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
6. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಇ-ಆಡಳಿತ ವಿಭಾಗಕ್ಕೆ - ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
8. ರಿಜಿಸ್ಟ್ರಾರ್(ಪರೀಕ್ಷೆ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
9. ಕಛೇರಿ ಪ್ರತಿ.